**All India Radio: Bangalore**
**National Bulletin In Kannada**
**01.09.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**01.09.2026 07.35 a.m.**
***************

ಮುಖ್ಯಾಂಶಗಳು

೧. ಕಿರ್ಗಿಸ್ತಾನ್‌ನಲ್ಲಿಂದು ೨೬ನೇ ಶಾಂಘೈ ಸಹಕಾರ ಸಂಘಟನೆ - ಎಸ್‌ಸಿಒ ಶೃಂಗಸಭೆ: ಪ್ರಧಾನಿ ನರೇಂದ್ರ ಮೋದಿ ಭಾಷಣ

೨. ಎರಡು ದಿನಗಳ ಜಿ-೨೦ ಹಣಕಾಸು ಸಚಿವರು ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳ ಸಭೆ; ಭಾರತದ ಉಪಸ್ಥಿತಿಯಲ್ಲಿ ಅಮೆರಿಕಾ ಆತಿಥ್ಯ

೩. ನವದೆಹಲಿಯಲ್ಲಿಂದು ೪ನೇ ಭಾರತ-ಜರ್ಮನ್ ಪರಿಸರ ವೇದಿಕೆ ಸಭೆ

೪. ಎರಡು ವಾರಗಳ ಸ್ವಚ್ಛತಾ ಪಖ್ವಾಡಾ-೨೦೨೬ ಅಭಿಯಾನಕ್ಕೆ ಇಂದು ಕೇಂದ್ರ ಸಚಿವ ಜೆ.ಪಿ.ನಡ್ಡಾ ಚಾಲನೆ

೫. ಅಂತಾರಾಷ್ಟ್ರೀಯ ಫುಟ್‌ಬಾಲ್‌ಗೆ ದಿಗ್ಗಜ ಲಿಯೋನೆಲ್ ಮೆಸ್ಸಿ ನಿವೃತ್ತಿ ಘೋಷಣೆ

***************

ಕಿರ್ಗಿಸ್ತಾನ್‌ನ ರಾಜಧಾನಿ ಬಿಷ್ಕೆಕ್‌ನಲ್ಲಿಂದು ನಡೆಯಲಿರುವ ೨೬ನೇ ಶಾಂಘೈ ಸಹಕಾರ ಸಂಘಟನೆಯ - ಎಸ್‌ಸಿಒ ಶೃಂಗಸಭೆಯನ್ನು ಉದ್ದೇಶಿಸಿ ಪ್ರಧಾನಮಂತ್ರಿ ನರೇಂದ್ರ ಮೋದಿ ಭಾಷಣ ಮಾಡಲಿದ್ದಾರೆ. ಎಸ್‌ಸಿಒ ಸಂಸ್ಥೆಯ ೨೫ನೇ ವರ್ಷಾಚರಣೆಯ ಸ್ಮರಣಾರ್ಥ ಈ ಶೃಂಗಸಭೆಯನ್ನು ಆಯೋಜಿಸಲಾಗಿದೆ.

ಚೀನಾ ಮತ್ತು ರಷ್ಯಾ ಸೇರಿದಂತೆ ೧೦ ಸದಸ್ಯ ರಾಷ್ಟ್ರಗಳನ್ನು ಹೊಂದಿರುವ ಈ ಒಕ್ಕೂಟದಲ್ಲಿ ಭಾರತವು ೨೦೧೭ ರಿಂದ ಖಾಯಂ ಸದಸ್ಯತ್ವವನ್ನು ಹೊಂದಿದೆ.

ತಮ್ಮ ಭಾಷಣದಲ್ಲಿ ಪ್ರಧಾನಿ ನರೇಂದ್ರ ಮೋದಿ, ಭದ್ರತೆ, ಸಂಪರ್ಕ ಮತ್ತು ಹೊಸ ಅವಕಾಶಗಳ ಕ್ಷೇತ್ರಗಳಲ್ಲಿ ಭಾರತದ ಆದ್ಯತೆಗಳನ್ನು ಪ್ರತಿಪಾದಿಸುವ ನಿರೀಕ್ಷೆಯಿದೆ. ಭಯೋತ್ಪಾದನೆ, ಪ್ರತ್ಯೇಕತಾವಾದ ಹಾಗೂ ಉಗ್ರವಾದದ ವಿರುದ್ಧದ ಹೋರಾಟದಲ್ಲಿ ಯಾವುದೇ ಇಬ್ಬಗೆಯ ನೀತಿ ಇರಬಾರದು ಎಂದು ಪ್ರತಿಪಾದಿಸಲಿರುವ ಭಾರತ, ಪ್ರಾದೇಶಿಕ ಶಾಂತಿ ಮತ್ತು ಸಮೃದ್ಧಿಗೆ ಸದಸ್ಯ ರಾಷ್ಟ್ರಗಳ ನಡುವಿನ ಸಂಪರ್ಕ ವೃದ್ಧಿ ಅಗತ್ಯ ಆದರೆ ಈ ಯೋಜನೆಗಳು ಪ್ರತಿಯೊಂದು ದೇಶದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯನ್ನು ಗೌರವಿಸಬೇಕು ಎಂಬುದನ್ನು ಸ್ಪಷ್ಟಪಡಿಸಲಿದೆ.

ಇದರ ಜೊತೆಗೆ, ಎಸ್‌ಸಿಒ ರಾಷ್ಟ್ರಗಳ ಯುವಜನರಲ್ಲಿ ನಾವೀನ್ಯತೆ ಮತ್ತು ಉದ್ಯಮಶೀಲತೆ ಹೆಚ್ಚಿಸಲು ನವೋದ್ಯಮ ಪರಿಸರ ವ್ಯವಸ್ಥೆಯನ್ನು ಉತ್ತೇಜಿಸುವ ಅಗತ್ಯವನ್ನು ಭಾರತ ಪ್ರತಿಪಾದಿಸಲಿದೆ.

ತಮ್ಮ ಎರಡು ದಿನಗಳ ಪ್ರವಾಸದ ಮೊದಲ ದಿನವಾದ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾ, ಇರಾನ್, ಕಿರ್ಗಿಜ್ ಗಣರಾಜ್ಯ ಮತ್ತು ಅರ್ಮೇನಿಯಾ ದೇಶಗಳ ನಾಯಕರೊಂದಿಗೆ ಪ್ರತ್ಯೇಕ ದ್ವಿಪಕ್ಷೀಯ ಸಭೆಗಳನ್ನು ನಡೆಸಿ ಪರಸ್ಪರ ಹಿತಾಸಕ್ತಿಯ ವಿಷಯಗಳ ಕುರಿತು ಚರ್ಚಿಸಿದರು.

ನಂತರ, ಬಿಷ್ಕೆಕ್‌ನಲ್ಲಿ ಆಯೋಜಿಸಲಾಗಿದ್ದ ಪ್ರಸಿದ್ಧ '೬ನೇ ವರ್ಲ್ಡ್ ನೋಮ್ಯಾಡ್ ಗೇಮ್ಸ್' ಕ್ರೀಡಾಕೂಟದ ಅಧಿಕೃತ ಉದ್ಘಾಟನಾ ಸಮಾರಂಭದಲ್ಲಿ ಪ್ರಧಾನಿಯವರು ಎಸ್‌ಸಿಒ ನಾಯಕರೊಂದಿಗೆ ಭಾಗವಹಿಸಿದರು.

***************

ಅಮೆರಿಕದ ಆಶ್ವಿಲ್ಲೆಯಲ್ಲಿ ಇಂದು ನಡೆಯುವ ಎರಡು ದಿನಗಳ ಜಿ-೨೦ ಹಣಕಾಸು ಸಚಿವರು ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳ ಸಭೆಯಲ್ಲಿ ಭಾರತ ಭಾಗವಹಿಸುತ್ತಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾರತದ ನಿಯೋಗದ ನೇತೃತ್ವ ವಹಿಸಿದ್ದಾರೆ.

ಅಮೆರಿಕಾ ಜಿ೨೦ ಅಧ್ಯಕ್ಷತೆಯಲ್ಲಿ ನಡೆಯುವ ಈ ಸಭೆಯು ಜಾಗತಿಕ ಆರ್ಥಿಕ ಬೆಳವಣಿಗೆ, ಆರ್ಥಿಕ ಸ್ಥಿರತೆ, ಹೆಚ್ಚುತ್ತಿರುವ ಸಾಲ, ವ್ಯಾಪಾರ, ಹೂಡಿಕೆ ಮತ್ತು ಅಂತಾರಾಷ್ಟ್ರೀಯ ಹಣಕಾಸು ವ್ಯವಸ್ಥೆಗೆ ಸುಧಾರಣೆಗಳ ಮೇಲೆ ಕೇಂದ್ರೀಕರಿಸುತ್ತದೆ.

ಸಭೆಯ ಹಿನ್ನೆಲೆಯಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಯುಕೆ ಚಾನ್ಸಲರ್ ಆಫ್ ದಿ ಎಕ್ಸ್‌ಚೆಕರ್, ಜಾನ್ ಹೀಲಿ ಅವರೊಂದಿಗೆ ವ್ಯಾಪಾರ ಮತ್ತು ಹೂಡಿಕೆ ಸಹಕಾರದ ಕುರಿತು ಮಾತುಕತೆ ನಡೆಸಿದರು.

ಈ ವರ್ಷ ಡಿಸೆಂಬರ್ ೧೪-೧೫ ರಂದು ಮಿಯಾಮಿಯಲ್ಲಿ ಪ್ರಮುಖ ಜಿ-೨೦ ನಾಯಕರ ಶೃಂಗಸಭೆ ನಡೆಯಲಿದೆ.

***************

ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸಲು ಹಾಗೂ ಪರಿಸರ ಮತ್ತು ಹವಾಮಾನ ಬದಲಾವಣೆ ಕುರಿತು ವಿವಿಧ ಪಾಲುದಾರರ ನಡುವೆ ವಿಚಾರ ವಿನಿಮಯಕ್ಕೆ ವೇದಿಕೆ ಕಲ್ಪಿಸಲು ４ನೇ ಭಾರತ-ಜರ್ಮನ್ ಪರಿಸರ ವೇದಿಕೆ' ಸಭೆಯು ಇಂದು ನವದೆಹಲಿಯಲ್ಲಿ ನಡೆಯಲಿದೆ.

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಹಾಗೂ ಜರ್ಮನಿಯ ಪರಿಸರ, ಹವಾಮಾನ ಸಂರಕ್ಷಣೆ, ಪ್ರಕೃತಿ ಸಂರಕ್ಷಣೆ ಮತ್ತು ಪರಮಾಣು ಸುರಕ್ಷತೆ ಸಚಿವ ಕಾರ್ಸ್ಟನ್ ಷ್ನೈಡರ್ ಅವರು ಈ ವೇದಿಕೆಯ ಸಹ-ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಸಭೆಯಲ್ಲಿ ಉಭಯ ದೇಶಗಳ ನಾಯಕರು ಪರಿಸರ ಸಂರಕ್ಷಣೆ ಮತ್ತು ಹವಾಮಾನ ನೀತಿಗೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚಿಸಲಿದ್ದು, ಅನುಭವಗಳನ್ನು ಹಂಚಿಕೊಳ್ಳುವ ಮೂಲಕ ಪ್ರಾಯೋಗಿಕ ಸಹಭಾಗಿತ್ವವನ್ನು ಮತ್ತಷ್ಟು ಮುನ್ನಡೆಸಲಿದ್ದಾರೆ.

***************

ಸೋನ್ ನದಿ ನೀರು ಹಂಚಿಕೆ ಕುರಿತು ಬಿಹಾರ ಮತ್ತು ಜಾರ್ಖಂಡ್ ನಡುವೆ ತಿಳಿವಳಿಕೆ ಒಡಂಬಡಿಕೆಗೆ ನಿನ್ನೆ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮ್ಮುಖದಲ್ಲಿ ಸಹಿ ಹಾಕಲಾಯಿತು.

ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್, ಬಿಹಾರ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ, ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಸೇರಿದಂತೆ ಗಣ್ಯರ ಸಮ್ಮುಖದಲ್ಲಿ ಒಡಂಬಡಿಕೆಗೆ ಸಹಿ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಮಿತ್ ಶಾ, ಬಿಹಾರ ಮತ್ತು ಜಾರ್ಖಂಡ್ ನಡುವಿನ ಈ ಒಡಂಬಡಿಕೆಯಿಂದ ಪೂರ್ವ ಭಾರತದಲ್ಲಿ ದೀರ್ಘಕಾಲದಿಂದ ಬಾಕಿ ಉಳಿದಿದ್ದ ನೀರು ಹಂಚಿಕೆ ವಿವಾದಕ್ಕೆ ಪರಿಹಾರ ದೊರೆತಿದೆ ಎಂದು ಹೇಳಿದರು.

***************

ಎರಡು ವಾರಗಳ ಸ್ವಚ್ಛತಾ ಪಖ್ವಾಡಾ-೨೦೨೬ ಅಭಿಯಾನಕ್ಕೆ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಜೆ.ಪಿ.ನಡ್ಡಾ ಇಂದು ಚಾಲನೆ ನೀಡಲಿದ್ದಾರೆ. ಈ ಸಂದರ್ಭದಲ್ಲಿ ರಸಗೊಬ್ಬರ ಇಲಾಖೆಯ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿಯೊಂದಿಗೆ ಅವರು ಸ್ವಚ್ಛತಾ ಪ್ರತಿಜ್ಞೆ ಬೋಧಿಸಲಿದ್ದಾರೆ. ಇದೇ ೧೫ರವರೆಗೆ ಪಖ್ವಾಡಾ ಆಚರಿಸಲಾಗುವುದು.

ಏಕಬಳಕೆಯ ಪ್ಲಾಸ್ಟಿಕ್ ನಿರ್ಮೂಲನೆ ಹಾಗೂ ಬಟ್ಟೆ ಚೀಲಗಳು ಮತ್ತು ಮರುಬಳಕೆ ಮಾಡಬಹುದಾದ ಬಾಟಲಿಗಳ ಬಳಕೆಗೆ ಉತ್ತೇಜನ ನೀಡುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುವುದು.

***************

ಚಿಲ್ಲರೆ ಆಸಿಡ್ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಬೇಕೇ ಅಥವಾ ಇನ್ನಷ್ಟು ಕಠಿಣ ನಿಯಮಗಳ ಮೂಲಕ ನಿಯಂತ್ರಿಸಬೇಕೇ? ಎಂಬ ಕುರಿತು ಕೇಂದ್ರ ಸರ್ಕಾರದ ಪ್ರತಿಕ್ರಿಯೆಯನ್ನು ಸುಪ್ರೀಂ ಕೋರ್ಟ್ ನಿನ್ನೆ ಕೋರಿದೆ. ೨೦೧೩ರಲ್ಲಿ ಆಸಿಡ್ ಚಿಲ್ಲರೆ ಮಾರಾಟ ನಿಯಂತ್ರಣಕ್ಕೆ ಮಾರ್ಗಸೂಚಿಗಳನ್ನು ಹೊರಡಿಸಿದ್ದರೂ, ಆಸಿಡ್ ಸುಲಭವಾಗಿ ಲಭ್ಯವಾಗುತ್ತಿರುವ ಬಗ್ಗೆ ಆತಂಕ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ನ್ಯಾಯಾಲಯ ಈ ನಿರ್ದೇಶನ ನೀಡಿದೆ.

ಆಸಿಡ್ ದಾಳಿ ಸಂತ್ರಸ್ತರಿಗೆ ಸೂಕ್ತ ಪುನರ್ವಸತಿ ಕ್ರಮಗಳನ್ನು ಆರು ವಾರಗಳೊಳಗೆ ರೂಪಿಸುವಂತೆ ಕೇಂದ್ರ ಸರ್ಕಾರ ಸೇರಿದಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ. ಮಾದರಿ ಪುನರ್ವಸತಿ ಯೋಜನೆ ರೂಪಿಸುವ ಜೊತೆಗೆ, ಅದರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ರಾಜ್ಯಗಳಿಗೆ ಅಗತ್ಯ ನೆರವು ಒದಗಿಸುವ ಬಗ್ಗೆಯೂ ಕೇಂದ್ರ ಸರ್ಕಾರ ಪರಿಗಣಿಸಬೇಕು ಎಂದು ನ್ಯಾಯಾಲಯ ಸೂಚಿಸಿದೆ.

***************

ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ನವದೆಹಲಿಯಲ್ಲಿ ಸಮಗ್ರ ಪರಿಶೀಲನಾ ಸಭೆ ನಡೆಸಿದರು.

ಸಭೆಯ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡ ಸಚಿವರು, ಭಾರತದ ಹಸಿರು ಅಭಿವೃದ್ಧಿಯನ್ನು ತ್ವರಿತಗೊಳಿಸುವ ಹಾಗೂ ಈಶಾನ್ಯ ರಾಜ್ಯಗಳಿಗೆ ವಿಶೇಷ ಆದ್ಯತೆ ನೀಡಿ ದೇಶಾದ್ಯಂತ ನವೀಕರಿಸಬಹುದಾದ ಇಂಧನ ಯೋಜನೆಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಸಲಾಯಿತು ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಪ್ರಮುಖ ಯೋಜನೆಗಳಾದ 'ಪಿಎಂ ಸೂರ್ಯ ಘರ್', 'ಪಿಎಂ ಕುಸುಮ್' ಮತ್ತು 'ಪಿಎಂ-ಜನ್‌ಮನ್' ಕಾರ್ಯಕ್ರಮಗಳ ಅನುಷ್ಠಾನದ ಪ್ರಗತಿಯನ್ನು ಸಚಿವರು ಪರಿಶೀಲಿಸಿದರು.

***************

ಸಹಕಾರಿ ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸಲು, ರಾಷ್ಟ್ರೀಯ ಆದ್ಯತೆಗಳ ಸಾಮೂಹಿಕ ಮುಂದಾಳತ್ವವನ್ನು ಬೆಳೆಸಲು ಮತ್ತು ನಿಕಟ ಕೇಂದ್ರ-ರಾಜ್ಯ ಸಹಯೋಗದ ಮೂಲಕ ಫಲಿತಾಂಶಗಳನ್ನು ವೇಗಗೊಳಿಸಲು ಜಲಶಕ್ತಿ ಸಚಿವಾಲಯವು ಇಂದು ನವದೆಹಲಿಯಲ್ಲಿ ಎರಡು ದಿನಗಳ ಇಲಾಖಾ ಶೃಂಗಸಭೆಯನ್ನು ಆಯೋಜಿಸಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ನವೀನ ವೇದಿಕೆಯಾಗಿ ಕಲ್ಪಿಸಿಕೊಂಡಿರುವ ಇಲಾಖಾ ಶೃಂಗಸಭೆಗಳ ಸರಣಿಯಲ್ಲಿ ಇದು ಮೊದಲನೆಯ ಶೃಂಗಸಭೆಯಾಗಿದೆ.

***************

ಜಗತ್ತು ಕಂಡ ಶ್ರೇಷ್ಠ ಫುಟ್‌ಬಾಲ್ ಆಟಗಾರರಲ್ಲಿ ಒಬ್ಬರಾದ ಅರ್ಜೆಂಟೀನಾ ಫುಟ್‌ಬಾಲ್ ತಂಡದ ಲಿಯೋನೆಲ್ ಮೆಸ್ಸಿ, ಅಂತಾರಾಷ್ಟ್ರೀಯ ಫುಟ್‌ಬಾಲ್‌ಗೆ ನಿವೃತ್ತಿ ಘೋಷಿಸುವ ಮೂಲಕ ತಮ್ಮ ೨೦ ವರ್ಷಗಳ ಸುದೀರ್ಘ ಹಾಗೂ ಯಶಸ್ವಿ ಕ್ರೀಡಾ ಜೀವನಕ್ಕೆ ತೆರೆ ಎಳೆದಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ೩೯ ವರ್ಷದ ಮೆಸ್ಸಿ, ಇನ್ನು ಮುಂದೆ ತಾವು ಅರ್ಜೆಂಟೀನಾ ರಾಷ್ಟ್ರೀಯ ತಂಡದ ಜರ್ಸಿಯಲ್ಲಿ ಕಣಕ್ಕಿಳಿಯುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ವಿಶ್ವಕಪ್ ಗೆಲುವು, ಎರಡು ಕೊಪಾ ಅಮೆರಿಕ ಪ್ರಶಸ್ತಿಗಳು ಹಾಗೂ ದೇಶದ ಪರ ದಾಖಲೆಯ ೨೦೭ ಪಂದ್ಯಗಳನ್ನು ಆಡಿದ ಹೆಗ್ಗಳಿಕೆಯೊಂದಿಗೆ ಮೆಸ್ಸಿ ಅಂತಾರಾಷ್ಟ್ರೀಯ ಅಂಗಳಕ್ಕೆ ವಿದಾಯ ಹೇಳಿದ್ದಾರೆ.

ಇತ್ತೀಚೆಗೆ ಸ್ಪೇನ್ ವಿರುದ್ಧ ನಡೆದ ವಿಶ್ವಕಪ್ ಫೈನಲ್ ಪಂದ್ಯದ ಸೋಲಿನಿಂದಲೇ ನಿವೃತ್ತಿಯ ಆಲೋಚನೆ ಮನಸ್ಸಿನಲ್ಲಿತ್ತು ಹಾಗೂ ತಂದೆಯ ಅಗಲಿಕೆಯು ಈ ನಿರ್ಧಾರವನ್ನು ಕೈಗೊಳ್ಳಲು ಮತ್ತಷ್ಟು ಪ್ರೇರೇಪಿಸಿತು ಎಂದು ಮೆಸ್ಸಿ ತಿಳಿಸಿದ್ದಾರೆ. ರಾಷ್ಟ್ರೀಯ ತಂಡ ಹಾಗೂ ಅಭಿಮಾನಿಗಳೊಂದಿಗೆ ಹೊಂದಿದ್ದ ಭಾವನಾತ್ಮಕ ಸಂಬಂಧದಿಂದಾಗಿ ಈ ನಿರ್ಧಾರ ಅತ್ಯಂತ ನೋವಿನಿಂದ ಕೂಡಿದೆ ಎಂದು ಅವರು ಹೇಳಿದ್ದಾರೆ.

******** ಮುಕ್ತಾಯ *******